ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಶಾಖೆ / ವಿಷಯ : DEPARTMENT / SUBJECT: ಮಳೆ
ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ
ದಿನಾಂಕ : DATE : 15/10/2020

## ಉತ್ತರ ಕರ್ನಾಟಕದ 6 ಜಿಲ್ಲೆಗಳಲ್ಲಿ ಎಲ್ಲೆಲ್ಲೂ ನೀರು ನೀರು ನೀರು...

# ರಾಜ್ಯದಲ್ಲಿ ವರುಣ ಮೃದಂಗ!

### ಬಂಗಾಳಕೊಲ್ಲಿ ವಾಯುಭಾರ ಕುಸಿತ ಎಫೆಕ್ಟ್ | ಉತ್ತರ ಕರ್ನಾಟಕ, ಕರಾವಳಿಯಲ್ಲಿ ಭಾರೀ ಮಳೆ

### ನೂರಾರು ಗ್ರಾಮ, ಕೃಷಿ ಭೂಮಿ ಜಲಾವೃತ | ಮನೆ, ರಸ್ತೆ, ಸೇತುವೆಗಳಿಗೆ ಹಾನಿ | ಮತ್ತೆ 4 ಬಲಿ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಬಂಗಾಳಕೊಲ್ಲಿಯಲ್ಲಿ ಉಂಟಾದ ವಾಯುಭಾರ ಕುಸಿತದಿಂದಾಗಿ ಉತ್ತರ ಕರ್ನಾಟಕದ ಆರು ಜಿಲ್ಲೆಗಳು ಹಾಗೂ ಕರಾವಳಿ ಭಾಗದಲ್ಲಿ ಮಂಗಳವಾರ ರಾತ್ರಿಯಿಂದೀಚೆಗೆ ಭರ್ಜರಿ ಮಳೆಯಾಗಿದೆ. ಕಾಗಿಣಾ, ಘಟಪ್ರಭಾ, ಡೋಣಿ, ಭೀಮಾ ಸೇರಿ ಉತ್ತರ ಕರ್ನಾಟಕದ ಅನೇಕ ನದಿಗಳು, ಪ್ರಮುಖ ಹಳ್ಳಗಳು ಅಪಾಯಮಟ್ಟ ಮೀರಿ ಹರಿಯುತ್ತಿದ್ದು, 113ಕ್ಕೂ ಹೆಚ್ಚು ಗ್ರಾಮಗಳಿಗೆ ನೀರು ನುಗ್ಗಿದೆ. ಭತ್ತ, ಜೋಳ, ಕಬ್ಬು, ಹತ್ತಿ ಸೇರಿದಂತೆ 2.68 ಲಕ್ಷ ಹೆಕ್ಟೇರ್‌ಗೂ ಹೆಚ್ಚು ಎಕರೆ ಪ್ರದೇಶದಲ್ಲಿ ಬೆಳೆಹಾನಿಯಾಗಿದೆ. ಮಳೆ ಸಂಬಂಧಿ ಅನಾಹುತಕ್ಕೆ ನಾಲ್ವರು ಬಲಿಯಾಗಿದ್ದು, 325ಕ್ಕೂ ಹೆಚ್ಚು ಮನೆಗಳಿಗೆ ಹಾನಿಯಾಗಿದೆ.

ಉತ್ತರ ಕರ್ನಾಟಕ ಭಾಗದ ಒಟ್ಟು 10 ಜಿಲ್ಲೆಗಳಲ್ಲಿ ಮಳೆಯಾಗಿದ್ದು, ಇದರಲ್ಲಿ ಯಾದಗಿರಿ, ಕಲಬುರಗಿ, ವಿಜಯಪುರ, ಬಳ್ಳಾರಿ, ಬೆಳಗಾವಿ, ಬಾಗಲಕೋಟೆಯಲ್ಲಿ ಅಬ್ಬರದಿಂದ ಮಳೆ ಸುರಿದಿದೆ. ಬೀದರ್, ಗದಗ, ಹಾವೇರಿ, ಕೊಪ್ಪಳ ಜಿಲ್ಲೆಗಳಲ್ಲಿ ಸಾಧಾರಣ ಮಳೆ ಬಿದ್ದಿದೆ. ಬಂಗಾಳಕೊಲ್ಲಿಯಲ್ಲಿನ ವಾಯುಭಾರ ಕುಸಿತದ ಪರಿಣಾಮ ರಾಜ್ಯದ ಕರಾವಳಿ ಜಿಲ್ಲೆಗಳ ಮೇಲೂ ಆಗಿದ್ದು, ಉಡುಪಿ, ಉತ್ತರಕನ್ನಡ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಇಡೀ ರಾತ್ರಿ ಉತ್ತಮ ಮಳೆಯಾಗಿದೆ. ಮಂಗಳೂರು ನಗರದಲ್ಲಿ ಕೃತಕ ನೆರೆ ಸೃಷ್ಟಿಯಾಗಿ ಕೆಲಕಾಲ ಜನಜೀವನ ಅಸ್ತವ್ಯಸ್ತಗೊಂಡಿತ್ತು. ಸಮುದ್ರದಲ್ಲಿ ಭಾರೀ ಅಲೆ ಏಳುತ್ತಿರುವ ಹಿನ್ನೆಲೆಯಲ್ಲಿ ಮೀನುಗಾರಿಕಾ ಬೋಟ್‌ಗಳೆಲ್ಲ ತೀರದಲ್ಲೇ ಲಂಗರು ಹಾಕಬೇಕಾಯಿತು.

**ಪ್ರವಾಹಕ್ಕೆ ಕೊಚ್ಚಿಹೋದ ಇಬ್ಬರು:** ಮಳೆ ಸಂಬಂಧಿ ಅನಾಹುತಕ್ಕೆ ಕಲಬುರಗಿಯಲ್ಲಿ ಇಬ್ಬರು ಸೇರಿ ರಾಜ್ಯದಲ್ಲಿ ಒಟ್ಟು ನಾಲ್ಕು ಮಂದಿ ಬಲಿಯಾಗಿದ್ದಾರೆ.

ಕಲಬುರಗಿ ನಗರದಲ್ಲಿ ವಿದ್ಯುತ್ ಸ್ಪರ್ಶಿಸಿ ಸುಂದರ ನಗರದ ನಿವಾಸಿ ಭೀಮಾಬಾಯಿ (96), ಗದಗ ಜಿಲ್ಲೆ ರೋಣ ತಾಲೂಕಿನಲ್ಲಿ ಗೋಡೆ ಕುಸಿದು ಶಂಕ್ರಮ್ಮ ಭೀಮನಗೌಡ್ರ (63), ಗದಗ ಜಿಲ್ಲೆ ನರಗುಂದ ತಾಲೂಕಿನ ಕೊಣ್ಣೂರು ಗ್ರಾಮದ ರೈತ ವೆಂಕನಗೌಡ ಸಾಲಿಗೌಡ್ರ (51) ಮಲಪ್ರಭಾ ನದಿಯನ್ನು ದಾಟುವಾಗ ಹಾಗೂ ಕಲಬುರಗಿ ಜಿಲ್ಲೆಯ ಜೇವರ್ಗಿ ತಾಲೂಕಿನ ನರಿಬೋಳ ಗ್ರಾಮದಲ್ಲಿ ಭೀಮಾ ನದಿದಾಟುವಾಗ ಬಗವಾನ (21) ನೀರಿನಲ್ಲಿ ಕೊಚ್ಚಿಹೋಗಿದ್ದಾರೆ. ➘9



ಕಲಬುರಗಿ ಜಿಲ್ಲೆಯ ಚಿಂಚೋಳಿ ಪಟ್ಟಣದಲ್ಲಿ ಬುಧವಾರ ಮಳೆ ನೀರಿನಲ್ಲಿ ಸಿಲುಕಿಕೊಂಡಿದ್ದವರನ್ನು ಪೊಲೀಸ್ ಅಧಿಕಾರಿಯೊಬ್ಬರು ರಕ್ಷಿಸಿ ಕರೆತರುತ್ತಿರುವುದು.

**13 ಜಿಲ್ಲೆ:** ಉತ್ತರ ಕರ್ನಾಟಕ, ಕರಾವಳಿ ಜಿಲ್ಲೆಯಲ್ಲಿ ಭಾರೀ ಮಳೆ

**113 ಗ್ರಾಮ:** ಭಾರೀ ಮಳೆಯಿಂದಾಗಿ ಜಲಾವೃತವಾದ ಹಳ್ಳಿಗಳು

**325 ಮನೆ:** ಪ್ರವಾಹ ಪರಿಸ್ಥಿತಿಯಿಂದಾಗಿ ಹಾನಿಯಾದ ಮನೆಗಳು

**2.7 ಲಕ್ಷ ಎಕರೆ:** ಅಂದಾಜು ಬೆಳೆ ಹಾನಿಯಾದ ಕೃಷಿ ಭೂಮಿ ಪ್ರದೇಶ

## ತೆಲಂಗಾಣ, ಆಂಧ್ರದಲ್ಲಿ ಮಳೆ ಪ್ರತಾಪ: 29 ಬಲಿ

### ಹೈದರಾಬಾದಲ್ಲಿ 117 ವರ್ಷದ ದಾಖಲೆ

ಹೈದರಾಬಾದ್: ಬಂಗಾಳಕೊಲ್ಲಿಯಲ್ಲಿ ವಾಯುಭಾರ ಕುಸಿತದಿಂದಾಗಿ ತೆಲಂಗಾಣ, ಆಂಧ್ರದಲ್ಲಿ ಕಳೆದ 48 ತಾಸುಗಳಿಂದ ಧಾರಾಕಾರ ಮಳೆಯಾಗುತ್ತಿದೆ. ತೆಲಂಗಾಣ ರಾಜಧಾನಿ ಹೈದರಾಬಾದ್‌ನಲ್ಲಿ 117 ವರ್ಷಗಳ ದಾಖಲೆಯ ಮಳೆಯಾಗಿದೆ. ರಸ್ತೆಗಳು ನದಿಗಳಂತಾಗಿದ್ದು, ವಾಹನಗಳು ನೀರಲ್ಲಿ ಕೊಚ್ಚಿ ಹೋಗುತ್ತಿವೆ. ತೆಲಂಗಾಣದಲ್ಲಿ 19, ಆಂಧ್ರದಲ್ಲಿ 10 ಮಂದಿ ಸಾವಿಗೀಡಾಗಿದ್ದಾರೆ. ವಿವರ ➘11

## ಈ ಬಾರಿ ಭಾರೀ ಚಳಿ: 3 ರಾಜ್ಯಗಳಿಗೆ ಅಪಾಯ

ನವದೆಹಲಿ: ಒಂದೆಡೆ ಕೊರೋನಾ, ಮತ್ತೊಂದೆಡೆ ಧಾರಾಕಾರ ಮಳೆಯಿಂದ ಜನರು ತತ್ತರಿಸಿರುವಾಗಲೇ, ಈ ವರ್ಷ ವಿಪರೀತ ಎನಿಸುವಷ್ಟರ ಮಟ್ಟಿಗೆ ಚಳಿ ಇರಲಿದೆ. ರಾಜಸ್ಥಾನ, ಉತ್ತರಪ್ರದೇಶ, ಬಿಹಾರದಲ್ಲಿ ಅಧಿಕ ಸಾವುಗಳು ಸಂಭವಿಸಬಹುದು ಎಂದು ಹವಾಮಾನ ಇಲಾಖೆ ಭವಿಷ್ಯ ನುಡಿದಿದೆ. 'ಲಾ ನಿನಾ' ಎಂಬ ಹವಾಮಾನ ವೈಪರೀತ್ಯ ಪರಿಣಾಮ ಚಳಿ ಹೆಚ್ಚಲಿದೆ ಎಂದು ಅದು ಹೇಳಿದೆ. ವಿವರ ➘11

## ಉತ್ತರ ಕರ್ನಾಟಕ, ಕರಾವಳಿಗೆ ಇಂದೂ ರೆಡ್ ಅಲರ್ಟ್ ➘6

# ರಾಜ್ಯದಲ್ಲಿ ವರುಣ ಮೃದಂಗ!

ಮೊದಲ ಪುಟದಿಂದ

**ಕಲಬುರಗಿಯಲ್ಲಿ ಮುಸಲಧಾರೆ:** ಕಳೆದೈದು ದಿನಗಳಿಂದ ಮಳೆ ಕಾಣುತ್ತಿದ್ದ ಕಲಬುರಗಿಯಲ್ಲಂತೂ ಮಂಗಳವಾರ ರಾತ್ರಿಯಿಂದೀಚೆಗೆ ಮುಸಲಧಾರೆಯೇ ಸುರಿದಿದೆ. ಮಳೆ ಆರ್ಭಟಕ್ಕೆ ನದಿ, ಹಳ್ಳಗಳ ಪಕ್ಕದ 100ಕ್ಕೂ ಹೆಚ್ಚು ಗ್ರಾಮಗಳಿಗೆ ನೀರು ನುಗ್ಗಿ ಭಾರೀ ಅನಾಹುತ ಸಂಭವಿಸಿದೆ. ತಗ್ಗುಪ್ರದೇಶದ ಹಲವಡೆ ಜನರನ್ನು ಸುರಕ್ಷಿತ ಸ್ಥಳಗಳಿಗೆ ರವಾನಿಸಲಾಗಿದೆ. ಅಪಾಯದಲ್ಲಿ ಸಿಕ್ಕಿಹಾಕಿಕೊಂಡಿದ್ದ 10ಕ್ಕೂ ಹೆಚ್ಚು ಮಂದಿಯನ್ನು ಎನ್‌ಡಿಆರ್ ಎಫ್ ನೆರವಿನಿಂದ ರಕ್ಷಣೆ ಮಾಡಲಾಗಿದೆ. ಕಲಬುರಗಿಯಲ್ಲಿ 50ಕ್ಕೂ ಹೆಚ್ಚು ಮನೆಗಳಿಗೆ ನೀರು ನುಗ್ಗಿ, ವಾಹನ ಸಂಚಾರ ಸಂಪೂರ್ಣ ಸ್ಥಗಿತಗೊಂಡು, ಜನ ಪರದಾಡುವಂತಾಗಿದೆ.

**ಭಾರೀ ಬೆಳೆ ಹಾನಿ:** ಭಾರೀ ಮಳೆಯಿಂದಾಗಿ ಕಲಬುರಗಿಯಲ್ಲಿ ಅತೀ ಹೆಚ್ಚು ಬೆಳೆಹಾನಿಯಾಗಿದ್ದು, 2.47ಲಕ್ಷ ಎಕರೆ, ಯಾದಗಿರಿಯಲ್ಲಿ 4,942 ಎಕರೆ, ಬೆಳಗಾವಿಯಲ್ಲಿ 11 ಸಾವಿರ ಎಕರೆ, ವಿಜಯಪುರದಲ್ಲಿ 2 ಸಾವಿರ ಎಕರೆ, ಬಳ್ಳಾರಿ, ಬಾಗಲಕೋಟೆ ಮತ್ತಿತರ ಕಡೆ 200ಕ್ಕೂ ಅಧಿಕ ಎಕರೆ ಬೆಳೆ ಜಲಾವೃತಗೊಂಡಿದೆ. ಜೋಳ, ಕಬ್ಬು, ಭತ್ತದ ಬೆಳೆಗೆ ಅತೀ ಹೆಚ್ಚು ಹಾನಿಯಾಗಿದೆ. ರೈತರು ಕಣ್ಣೀರು ಹಾಕುವ ಸ್ಥಿತಿ ನಿರ್ಮಾಣವಾಗಿದೆ.

**ಮುಳುಗಡೆ, ಮನೆಗಳಿಗೆ ಹಾನಿ:** ಮಳೆ, ಪ್ರವಾಹದಬ್ಬರಕ್ಕೆ ಕಲಬುರಗಿಯಲ್ಲಿ 100ಕ್ಕೂ ಹೆಚ್ಚು, ಯಾದಗಿರಿಯಲ್ಲಿ 1 ಗ್ರಾಮ ಜಲಾವೃತವಾಗಿದೆ. ಇನ್ನು ಬೆಳಗಾವಿಯಲ್ಲಿ 188, ಬಾಗಲಕೋಟೆಯಲ್ಲಿ 50, ವಿಜಯಪುರದಲ್ಲಿ 1, ಯಾದಗಿರಿಯಲ್ಲಿ 72, ಗದಗದಲ್ಲಿ 13 ಮನೆಗಳಿಗೆ ಹಾನಿಯಾಗಿದೆ.

**ಘಟಪ್ರಭಾ ನದಿ ದಡದಲ್ಲಿ ಮತ್ತೆ ಆತಂಕ:** ಕೆಲ ತಿಂಗಳ ಹಿಂದಷ್ಟೇ ಮಹಾ ಪ್ರವಾಹಕ್ಕೆ ಸಾಕ್ಷಿಯಾಗಿದ್ದ ಬಾಗಲಕೋಟೆ ಜಿಲ್ಲೆಯ ಘಟಪ್ರಭಾ ನದಿ ಪಾತ್ರದ ಗ್ರಾಮಸ್ಥರು ಮಂಗಳವಾರ ರಾತ್ರಿಯಿಂದ ಆತಂಕದಿಂದಲೇ ದಿನದೂಕುತ್ತಿದ್ದಾರೆ. ಹಲವು ಮಂದಿ ಈಗಾಗಲೇ ಸುರಕ್ಷಿತ ಪ್ರದೇಶಕ್ಕೆ ಸ್ಥಳಾಂತರಗೊಂಡಿದ್ದಾರೆ. ಮುಂದಿನ ಎರಡ್ಮೂರು ದಿನ ಉತ್ತರ ಕರ್ನಾಟಕದಲ್ಲಿ ಭಾರೀ ಮಳೆಯಾಗುವ ಮುನ್ಸೂಚನೆ ಹಿನ್ನಲೆ ಯಲ್ಲಿ ಬೀದರ್, ಕಲಬುರಗಿ, ಯಾದಗಿರಿ, ವಿಜಯಪುರದಲ್ಲಿ ಜನರನ್ನು ಸುರಕ್ಷಿತ ಪ್ರದೇಶಗಳಿಗೆ ಸ್ಥಳಾಂತರಿಸುವ ಕೆಲಸ ನಡೆಯುತ್ತಿದೆ.

## ಬೆಳೆ ಹಾನಿ ಸಮೀಕ್ಷೆ ಮಾಡಿ ಪ್ಯಾಕೇಜ್ ಘೋಷಿಸಿ: ಸಿದ್ದು

**ಬೆಂಗಳೂರು:** ರಾಜ್ಯದಲ್ಲಿ ಅತಿವೃಷ್ಟಿಯಿಂದಾಗಿ ಹಾನಿಯಾಗಿರುವ ಬೆಳೆಗಳನ್ನು ಸಮರ್ಪಕವಾಗಿ ಸಮೀಕ್ಷೆ ಮಾಡಿ ತುರ್ತಾಗಿ ವಿಶೇಷ ಪ್ಯಾಕೇಜ್



ಘೋಷಿಸಿ ರೈತರಿಗೆ ಪರಿಹಾರ ನೀಡುವಂತೆ ವಿಧಾನಸಭೆ ವಿರೋಧ ಪಕ್ಷದ ನಾಯಕ ಸಿದ್ದರಾಮಯ್ಯ ಸರ್ಕಾರವನ್ನು ಒತ್ತಾಯಿಸಿದ್ದಾರೆ.

ಬುಧವಾರ ಈ ಕುರಿತು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪಗೆ ಪತ್ರ ಬರೆದಿರುವ ಅವರು, ಕಳೆದ 50 ವರ್ಷಗಳಲ್ಲಿ ಬೀಳದಷ್ಟು ಮಳೆ ಈ ಬಾರಿ ಸುರಿದಿದೆ. ಹಾಗಾಗಿ ಕೂಡಲೇ ಖರೀದಿ ಕೇಂದ್ರಗಳನ್ನು ತೆರೆದು ಕನಿಷ್ಠ ಬೆಂಬಲ ಬೆಲೆ ನಿಗದಿ ಮಾಡಿರುವ ಮೊತ್ತಕ್ಕಾದರೂ ರೈತರು ಬೆಳೆದ ಉತ್ಪನ್ನಗಳನ್ನು ಖರೀದಿ ಮಾಡಬೇಕು. ಜತೆಗೆ ಹಾನಿಯಾದ ಬೆಳೆಯ ಸಮೀಕ್ಷೆ ನಡೆಸಿ ಪರಿಹಾರ ನೀಡುವ ಮೂಲಕ ರೈತರ ನೆರವಿಗೆ ಸರ್ಕಾರ ಧಾವಿಸಬೇಕು ಎಂದು ಆಗ್ರಹಿಸಿದ್ದಾರೆ.

ಮುಂಗಾರಿನಲ್ಲಿ ಬಿತ್ತನೆ ಮಾಡಿದ್ದ ಹೆಸರು, ಉದ್ದು ಮುಂತಾದ ಬೆಳೆಗಳು ಕೊಯ್ಲು ಮಾಡುವ ಸಂದರ್ಭದಲ್ಲಿ ವಿಪರೀತ ಮಳೆ ಸುರಿದು ಗಿಡದಲ್ಲೇ ಮೊಳಕೆ ಬಂದು ಕೊಳೆತು ಹೋದವು. ಈಗ ಈರುಳ್ಳಿ, ಶೇಂಗಾ, ಹತ್ತಿ ಮುಂತಾದ ಬೆಳೆಗಳು ಸಹ ಹೊಲದಲ್ಲೇ ಕೊಳೆತು ಹೋಗುತ್ತಿವೆ. ಒಂದು ವೇಳೆ ಅಕ್ಟೋಬರ್-ನವೆಂಬರ್‌ನಲ್ಲಿ ಹೆಚ್ಚು ಮಳೆಯಾದರೆ ಕೈಗೆ ಬಂದ ತುತ್ತು ಬಾಯಿಗೆ ಬರದಂತಾಗುವ ಪರಿಸ್ಥಿತಿ ಇದೆ ಎಂದಿದ್ದಾರೆ.